ಕೆ.ವಿ. ನಿಟ್ಟೂರು ಮತ್ತು 15 ಕಿ.ಮೀ. ದೂರದಲ್ಲಿರುವ 66 ಕ.ವಿ. ಚೇಳೂರು ವಿದ್ಯುತ್ ಉಪ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುತ್ತಿದೆ. ಮುಂದಿನ ದಿನಗಳಲ್ಲಿ ವಿದ್ಯುತ್ ಬೇಡಿಕೆಯ ಹೆಚ್ಚಳವನ್ನು ಆಧರಿಸಿ ಬಿದರೆ ಮತ್ತು ಸೋಮಲಾಪುರ ಗ್ರಾಮಗಳಲ್ಲಿ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು.

612 ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ವಿ.ಸಿ. ಫಾರಂ ಬಳಿ 66/11 ಕೆ.ವಿ. ಸಾಮರ್ಥ್ಯದ ರಿಸೀವಿಂಗ್ ಸ್ಟೇಷನ್ ಪ್ರಾರಂಭಿಸಲು ಅನುಮತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇಲ್ಲಿಯವರೆವಿಗೂ ಕಾಮಗಾರಿಯನ್ನು ಪ್ರಾರಂಭ ಮಾಡದಿರುವುದಕ್ಕೆ ಕಾರಣಗಳೇನು?

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಮತ್ತು ಆ)

ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ವಿ.ಸಿ.ಫಾರಂ ಬಳಿ ಒಂದು 66/11 ಕೆ.ವಿ. ಸಾಮರ್ಥ್ಯದ ಸಬ್‌ಸ್ಟೇಷನ್‌ನ ಕಾಮಗಾರಿಗಳು ಈಗಾಗಲೇ ಪ್ರಗತಿಯ ಹಂತದಲ್ಲಿದೆ. ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಮಾರ್ಚ್–2010ರ ಅಂತ್ಯದ ವೇಳೆಗೆ ಸದರೀ ಸಬ್‌ಸ್ಟೇಷನ್‌ನ್ನು ಕಾರ್ಯೋನ್ಮುಖಗೊಳಿಸುವ ಗುರಿಯನ್ನು ಹೊಂದಲಾಗಿದೆ.

747 ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೌರಶಕ್ತಿ ಅಭಿವೃದ್ಧಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು